ಕರ್ನಾಟಕ ಸರ್ಕಾರ

ಕಂದಾಯ ಇಲಾಖೆ

**ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಗ್ರಾಮಲೆಕ್ಕಿಗರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.**

ಒನಕೆ ಓಬವ್ವ ವೃತ್ತ
ಚಿತ್ರದುರ್ಗ

ದೂರವಾಣಿ ಸಂಖ್ಯೆ:08194-222811:222538
ಫ್ಯಾಕ್ಸ್ ಸಂಖ್ಯೆ:08194-224355
ಇ-ಮೇಲ್:deo.chitradurga@gmail.com

---

ಸಂ:ಗ್ರಾಲೆ:ಸಿಬ್ಬಂದಿ:ಸಿಆರ್-103/2014-15 ದಿನಾಂಕ:27-7-2015

**::ಅಧಿಸೂಚನೆ::**

**ವಿಷಯ:** ಚಿತ್ರದುರ್ಗ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

**ಉಲ್ಲೇಖ:** 1) ಸರ್ಕಾರದ ಅಧಿಸೂಚನೆ ಸಂ:ಕಂಇ-299 ಬಿಎಸ್‌ಸಿ 2006 ದಿನಾಂಕ:3-2-2009 ಮತ್ತು 24-7-2009.
2) ಸರ್ಕಾರದ ಪತ್ರ ಸಂ:ಕಂಇ-4:ಬಿಎಸ್‌ಸಿ 2011 ದಿ:25-2-2011.

%%%%%%

ಚಿತ್ರದುರ್ಗ ಜಿಲ್ಲಾ ಕಂದಾಯ ಇಲಾಖಾ ಘಟಕದಲ್ಲಿ ವಯೋ ನಿವೃತ್ತಿ, ಪದೋನ್ನತಿ, ಮರಣ, ನಿಯಮ 6ರಡಿ ವರ್ಗಾವಣೆ ಹಾಗೂ ಇನ್ನಿತರೆ ಕಾರಣದಿಂದ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ಕರ್ನಾಟಕ ನಾಗರೀಕ ಸೇವೆಗಳು (ರೆವಿನ್ಯೂ ಸಬಾರ್ಡಿನೇಟ್ ಬ್ರಾಂಚ್) ವೃಂದ ಮತ್ತು ನೇಮಕಾತಿ ತಿದ್ದುಪಡಿ ನಿಯಮಗಳು 2008 ಮತ್ತು 2009 ರನ್ವಯ ಹಾಗೂ ಉಲ್ಲೇಖದ ಸರ್ಕಾರದ ಅಧಿಸೂಚನೆಯಂತೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗದಿಪಡಿಸಿದ ನಮೂನೆಯಲ್ಲಿ ಅರ್ಜಿಗಳನ್ನು **ಆನ್‌ಲೈನ್ (ON LINE)** ಮೂಲಕ ಆಹ್ವಾನಿಸಲಾಗಿದೆ.

**ಹುದ್ದೆಗಳ ಸಂಖ್ಯೆಯನ್ನು ಕಡಿಮೆ ಅಥವಾ ಹೆಚ್ಚು ಮಾಡುವುದಕ್ಕೆ ಜಿಲ್ಲಾಧಿಕಾರಿಗಳಿಗೆ ಮಾತ್ರ ಅಧಿಕಾರವಿರುತ್ತದೆ.**

**ಹುದ್ದೆಗಳ ವಿವರ:**

| ಕ್ರ.ಸಂ: | ಹುದ್ದೆಯ ಹೆಸರು | ಒಟ್ಟು ಹುದ್ದೆ | ಶೈಕ್ಷಣಿಕ ವಿದ್ಯಾರ್ಹತೆ | ವೇತನ ಶ್ರೇಣಿ |
|---|---|---|---|---|
| 1 | ಗ್ರಾಮಲೆಕ್ಕಿಗರು | ಹಿಂಬಾಕಿ 5<br>ಪ್ರಸ್ತುತ 70<br>ಒಟ್ಟು 75 | 1) ದ್ವಿತೀಯ ಪಿ.ಯು.ಸಿ. ಅಥವಾ ಸಿ.ಬಿ.ಎಸ್.ಇ.ಅಥವಾ ಐ.ಸಿ.ಎಸ್.ಇ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.<br>2) ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.<br>3) ಕಂಪ್ಯೂಟರ್ ಸಾಮಾನ್ಯ ಜ್ಞಾನ ಹೊಂದಿರಬೇಕು. | 11600-21000 |

**ಮೀಸಲಾತಿ ವರ್ಗೀಕರಣ: (ಹಿಂಬಾಕಿ)**

| ಕ್ರ ಸಂ: | ಮೀಸಲಾತಿ | ಸಾಮಾನ್ಯ | ಮಹಿಳೆ | ಗ್ರಾಮೀಣ | ಅಂಗವಿಕಲ | ಮಾಜಿ ಸೈನಿಕ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 | 10 |
| 1 | ಪ.ಪಂ | - | - | 1 | - | - | - | - | 1 |
| 2 | ಪ್ರವರ್ಗ-1 | - | - | - | 1 | - | - | - | 1 |
| 3 | ಪ್ರವರ್ಗ-2ಎ | - | - | - | - | 1 | - | - | 1 |
| 4 | ಪ್ರವರ್ಗ-3ಎ | - | - | 1 | - | - | - | - | 1 |
| 5 | ಸಾಮಾನ್ಯ | - | - | - | 1 | - | - | - | 1 |
| | **ಒಟ್ಟು** | **-** | **-** | **2** | **2** | **1** | **-** | **-** | **5** |

<u>ಮೀಸಲಾತಿ ವರ್ಗೀಕರಣ: (ರೋಸ್ಟರ್ ಬಿಂದು (Vertical) 19 ರಿಂದ ಪ್ರಾರಂಭಿಸಲಾಗಿದೆ)</u>

| ಕ್ರ. ಸಂ: | ಮೀಸಲಾತಿ | ನಿಗದಿಪಡಿಸಿದ ಮೀಸಲಾತಿ (ಶೇಕಡವಾರು) | ಸಾಮಾನ್ಯ | ಮಹಿಳೆ | ಗ್ರಾಮೀಣ | ಅಂಗವಿಕಲ | ಮಾಜಿ ಸೈನಿಕ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 | 10 | 11 |
| 1 | ಪ.ಜಾತಿ | 15 | 3 | 3 | 2 | 1 | 1 | – | – | 10 |
| 2 | ಪ.ಪಂ. | 3 | – | 1 | 1 | – | – | – | – | 2 |
| 3 | ಪ್ರವರ್ಗ–1 | 4 | 1 | 1 | 1 | – | – | – | – | 3 |
| 4 | ಪ್ರವರ್ಗ–2ಎ | 15 | 3 | 3 | 2 | 1 | 1 | – | 1 | 11 |
| 5 | ಪ್ರವರ್ಗ–2ಬಿ | 4 | 1 | 1 | 1 | – | – | – | – | 3 |
| 6 | ಪ್ರವರ್ಗ–3ಎ | 4 | 1 | – | 1 | – | – | – | – | 2 |
| 7 | ಪ್ರವರ್ಗ–3ಬಿ | 5 | 1 | 1 | 1 | – | 1 | – | – | 4 |
| 8 | ಸಾಮಾನ್ಯ | 50 | 7 | 10 | 9 | 2 | 4 | 2 | 1 | 35 |
| | ಒಟ್ಟು | **100** | **17** | **20** | **18** | **4** | **7** | **2** | **2** | **70** |

**<u>ಅರ್ಜಿ ಸಲ್ಲಿಸುವ ವಿಧಾನ:</u>**

ಅರ್ಜಿಗಳನ್ನು ಆನ್‌ಲೈನ್ (On line) ಮೂಲಕ ಮಾತ್ರ ಸಲ್ಲಿಸತಕ್ಕದ್ದು. ಖುದ್ದಾಗಿ ಅಥವಾ ಅಂಚೆ ಅಥವಾ ಕೋರಿಯರ್ ಅಥವಾ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.

**<u>ಅರ್ಜಿ ಶುಲ್ಕ:</u>**

| ವರ್ಗ | ಶುಲ್ಕ (ರೂ) | ಪಾವತಿಸುವ ವಿಧಾನ |
|---|---|---|
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಪ್ರವರ್ಗ–1/ಅಂಗವಿಕಲ/ಮಾಜಿ ಸೈನಿಕರು | 100–00 | ಚಲನ್ ಮೂಲಕ ಎಸ್.ಬಿ.ಎಂ. ಜೆಸಿಆರ್ ಶಾಖೆ, ಚಿತ್ರದುರ್ಗ ಖಾತೆ ಸಂ:64094883524 IFSC Code:SBMY0040635 ಜಮಾ ಮಾಡತಕ್ಕದ್ದು. |
| ಇತರರು | 200–00 | |

**<u>ಆನ್ ಲೈನ್ (On line) ಮುಖಾಂತರ ಅರ್ಜಿ ಸಲ್ಲಿಸುವ ವಿಧಾನ:</u>**

ಅಭ್ಯರ್ಥಿಯು ಇಲಾಖೆಯ ಅಧಿಕೃತ ವೆಬ್‌ಸೈಟ್ **<u>http://chitradurga-va.kar.nic.in</u>** ತೆರೆದು ಕಂಪ್ಯೂಟರ್ ಪರದೆಯ ಮೇಲೆ ಬರುವ ಅರ್ಜಿಯನ್ನು ತುಂಬಬೇಕು. ನಂತರ ಅಭ್ಯರ್ಥಿಯು ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರವನ್ನು (jpg/gif) Browse ಮಾಡಿ, ನಂತರ Submit button ಅನ್ನು ಒತ್ತಿದರೆ ಅರ್ಜಿಯ ಸಂಖ್ಯೆ (Reference Number) ಸೃಷ್ಟಿಯಾಗುತ್ತದೆ. ಆನ್‌ಲೈನ್ ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು ಸ್ವೀಕೃತಿ ಪತ್ರ ಮತ್ತು ದ್ವಿಪ್ರತಿ ಚಲನ್ ಅನ್ನು ತೆಗೆದುಕೊಳ್ಳತಕ್ಕದ್ದು. ಈ ಚಲನ್ ಅನ್ನು ಅರ್ಜಿ ಶುಲ್ಕ ಪಾವತಿಸುವ ಬಗ್ಗೆ ಸ್ಟೇಟ್ ಬ್ಯಾಂಕ್ ಮೈಸೂರು ಬ್ಯಾಂಕ್‌ನಲ್ಲಿ ಪಾವತಿಸಬೇಕು. ಬ್ಯಾಂಕ್‌ನಲ್ಲಿ ನಿಗದಿತ ಅರ್ಜಿ ಶುಲ್ಕವನ್ನು ಪಾವತಿಸಲು ದಿ:4–9–2015 ರಂದು ಕೊನೆಯ ದಿನವಾಗಿರುತ್ತದೆ. ಅಭ್ಯರ್ಥಿಯು ಸ್ವೀಕೃತಿ ಸ್ಲೀಪ್ ಅನ್ನು ಮತ್ತು ಚಲನ್ ಪಾವತಿಯ ಒಂದು ಪ್ರತಿಯನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು. ಇನ್ನೊಂದು ಚಲನ್ ಪ್ರತಿ ಬ್ಯಾಂಕ್ ಬಳಿ ಇರುತ್ತದೆ. ಈ ದಾಖಲೆಗಳನ್ನು ಪರಿಶೀಲನೆಗೆ ನಿಗದಿಪಡಿಸಿದ ದಿನಾಂಕದಂದು ಹಾಜರುಪಡಿಸತಕ್ಕದ್ದು. ಅರ್ಜಿ ಶುಲ್ಕವನ್ನು ಡಿ.ಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಅಥವಾ ನಗದು ಮೂಲಕ ಸ್ವೀಕರಿಸುವುದಿಲ್ಲ. ಅರ್ಜಿ ಶುಲ್ಕ ಪಾವತಿಸಿರುವ ಚಲನ್ ಅನ್ನು ಸ್ಕ್ಯಾನ್ ಮಾಡಿ, ಅಪಲೋಡ್ ಮಾಡುವುದು ಕಡ್ಡಾಯವಾಗಿದ್ದು, ಚಲನ್ ಅಪಲೋಡ್ ಮಾಡದೆ ಇದ್ದಲ್ಲಿ ಅಂತಹ ಆನ್‌ಲೈನ್ ಅರ್ಜಿಯನ್ನು ತಿರಸ್ಕರಿಸಲಾಗುವುದು. ಸಲ್ಲಿಸಿರುವ ಅರ್ಜಿ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ. ಅಥವಾ ಬೇರೆ ಯಾವುದೇ ಇತರೆ ನೇಮಕಾತಿಗಳಿಗೆ ಹೊಂದಿಸಿ ಕೊಳ್ಳಲಾಗುವುದಿಲ್ಲ. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕದೊಳಗೆ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

<u>**ಅರ್ಹತಾ ಷರತ್ತುಗಳು:**</u>

- ಅರ್ಜಿದಾರರು ಭಾರತೀಯ ನಾಗರೀಕನಾಗಿರತಕ್ಕದ್ದು.
- **ಶೈಕ್ಷಣಿಕ ವಿದ್ಯಾರ್ಹತೆಯನ್ನು ಕರ್ನಾಟಕ ರಾಜ್ಯದಲ್ಲಿ ಪೂರೈಸಿರಬೇಕು.**
- ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು. ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.
- ನೈತಿಕ ದುರ್ನಡೆಯಿಂದಾಗಿ/ನೀತಿ ಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ/ಕೇಂದ್ರ/ಸ್ಥಳೀಯ ಸಂಸ್ಥೆ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ/ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ/ವಜಾ ಮಾಡಲ್ಪಟ್ಟಿದ್ದು ಕಂಡು ಬಂದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.
- ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ.

<u>**ವಯೋಮಿತಿ:**</u> ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

- ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.
- ಗರಿಷ್ಠ ವಯೋಮಿತಿ

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| 2ಎ, 2ಬಿ. 3ಎ, 3ಬಿ | 38 ವರ್ಷ |
| ಪ.ಜಾತಿ/ಪ. ಪಂಗಡ ಪ್ರ-1 | 40 ವರ್ಷ |
| ವಿಧವೆಯರು/ಅಂಗವಿಕಲ | ಚಾಲ್ತಿಯಲ್ಲಿ ನಿಗದಿಪಡಿಸಿರುವ ವಯೋಮಿತಿಗೆ 10 ವರ್ಷ ಹೆಚ್ಚಿಗೆ ಸೇರಿಸಿಕೊಳ್ಳಲಾಗುವುದು. |
| ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು/ಅವಳು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರು ಅಷ್ಟು ವರ್ಷಗಳಿಗೆ 3 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು. | |

ಜನ್ಮ ದಿನಾಂಕದ ಬಗ್ಗೆ ಎಸ್ಎಸ್ಎಲ್ಸಿ ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣ ಪತ್ರ (ಟಿ.ಸಿ.) ವನ್ನು ಮಾತ್ರ ಪರಿಗಣಿಸಲಾಗುವುದು. ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) 1977ರ ನಿಯಮಾವಳಿಗಳ ನಿಯಮ-6ರಂತೆ ಸಂಬಂಧಪಟ್ಟ ಪೂರಕ ದಾಖಲೆ ಒದಗಿಸಿದ್ದಲ್ಲಿ ಗರಿಷ್ಠ ವಯೋಮಿತಿ ಹೆಚ್ಚಿಸಲು ಅವಕಾಶವಿರುತ್ತದೆ.

<u>**ಜಾತಿ ಮೀಸಲಾತಿ ಪ್ರಮಾಣ ಪತ್ರಗಳು:**</u>

- ಪ.ಜಾತಿ/ಪ.ಪಂಗಡ ಅಭ್ಯರ್ಥಿಗಳು ನಮೂನೆ "ಡಿ"
- ಪವರ್ಗ-1 ಅಭ್ಯರ್ಥಿಗಳು ನಮೂನೆ "ಇ"
- ಪ್ರವರ್ಗ-2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ "ಎಫ್"

ಈ ಪ್ರಮಾಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕ:28-8-2015 ರ ಒಳಗೆ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಪಡೆದಿರಬೇಕು. ಹಾಗೂ ಇದರ ದೃಢೀಕೃತ ನಕಲನ್ನು ಅರ್ಜಿಯೊಂದಿಗೆ ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

**ಗ್ರಾಮೀಣ ಅಭ್ಯರ್ಥಿಗಳು:**

- ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರಬೇಕು. ಅಂತಹ ಅಭ್ಯರ್ಥಿಗಳು ಈ ಮೀಸಲಾತಿಯನ್ನು ಪಡೆಯಲು ಅರ್ಹರಾಗಿರುತ್ತಾರೆ.
- ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ–2ರಲ್ಲಿ ಶಾಲಾ ಮುಖ್ಯೋಪಾದ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿಕೊಂಡು ಅದರ ದೃಢೀಕೃತ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.
- ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ–2 ರ ಪ್ರಮಾಣ ಪತ್ರದ ಜೊತೆಗೆ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ–1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದು ಅದರ ದೃಢೀಕೃತ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.
- ಮೀಸಲಾತಿ ಪ್ರಮಾಣ ಪತ್ರವು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ.

**ಕನ್ನಡ ಮಾಧ್ಯಮ ಅಭ್ಯರ್ಥಿಗಳು:**

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನುಕೋರುವ ಅಭ್ಯರ್ಥಿಗಳು 1 ರಿಂದ 10ನೇ ತರಗತಿವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಧ್ಯಾಯರ ಸಹಿ ಹಾಗೂ ಮೊಹರು ನೊಂದಿಗೆ ಪಡೆದು ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿಕೊಂಡು ಅದರ ದೃಢೀಕೃತ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

**ಯೋಜನಾ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು:**

ಯೋಜನೆಗಳಿಂದ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್‌ರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದು, ಅದರ ದೃಢೀಕೃತ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

**ಅಂಗವಿಕಲರ ಮೀಸಲಾತಿ:**

ಸರ್ಕಾರದ ಅಧಿಸೂಚನೆ ಸಂ:ಡಿಪಿಎಆರ್–54:ಎಸ್‌ಆರ್‌ಆರ್–2012 ದಿ:23–6–2012 ರೀತ್ಯಾ ಗ್ರಾಮಲೆಕ್ಕಿಗರ ಹುದ್ದೆಗಳಲ್ಲಿ ಅಂಗವಿಕಲರ ಮೀಸಲಾತಿಯನ್ನು ಈ ಕೆಳಕಂಡ ವರ್ಗಗಳಿಗೆ ಮಾತ್ರ ಕಲ್ಪಿಸಲಾಗಿದೆ. ಇತರೆ ದೈಹಿಕ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಗ್ರಾಮಲೆಕ್ಕಿಗರ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

- ಕುಷ್ಟರೋಗದಿಂದ ಗುಣಮುಖರಾದವರು (Leprosy Cured)
- ಶ್ರವಣ ದೋಷವುಳ್ಳವರು (Hearing impaired)
- ಮಾನಸಿಕ ಅಸ್ವಸ್ಥತೆಯಿಂದ ಗುಣಮುಖರಾದವರು (Mentally ill)
- ದೈಹಿಕ ಅಂಗವಿಕಲತೆಯುಳ್ಳವರು (Loco motor Disability)

ಸರ್ಕಾರದ ಅಧಿಕೃತ ಜ್ಞಾಪನ ಪತ್ರ ಸಂ:ಸಿಆಸುಇ–128:ಸೆನೆನಿ–2005 ದಿ:19–11–2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದು, ಅದರ ದೃಢೀಕೃತ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು. ಹಾಗೂ ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.

**ಪರಿಶೀಲನೆಗೆ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು:**

- ದ್ವಿತೀಯ ಪಿ.ಯು.ಸಿ ಅಥವಾ ಸಿಬಿಎಸ್‌ಇ ಅಥವಾ ಐಸಿಎಸ್‌ಇ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ಬಗ್ಗೆ ಪ್ರಮಾಣ ಪತ್ರ,
- ಹುಟ್ಟಿದ ದಿನಾಂಕದ ಬಗ್ಗೆ ಪ್ರಮಾಣ ಪತ್ರ (ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣಪತ್ರ)
- ಕಂಪ್ಯೂಟರ್ ಸಾಮಾನ್ಯ ಜ್ಞಾನ ಹೊಂದಿರುವ ಬಗ್ಗೆ ಪ್ರಮಾಣ ಪತ್ರ,
- ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ಪಡೆದಿಟ್ಟು ಕೊಂಡಿರತಕ್ಕದ್ದು.
- ಜಾತಿ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ತಹಶೀಲ್ದಾರರಿಂದ ಪಡೆದ ಜಾತಿ ಪ್ರಮಾಪತ್ರ,
- ಗ್ರಾಮೀಣ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ, (1 ರಿಂದ 10ನೇ ತರಗತಿವರೆಗೆ)
- ಕನ್ನಡ ಮಾಧ್ಯಮ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ಕನ್ನಡ ಮಾಧ್ಯಮ ಪ್ರಮಾಣ ಪತ್ರ (1 ರಿಂದ 10ನೇ ತರಗತಿವರೆಗೆ)
- ಯೋಜನಾ ನಿರಾಶ್ರಿತರ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ಯೋಜನಾ ನಿರಾಶ್ರಿತರ ಪ್ರಮಾಣ ಪತ್ರ,
- ಮಾಜಿ ಸೈನಿಕ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ

**ಇತರೆ ಸೂಚನೆಗಳು :**

- ಸರ್ಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಅರ್ಜಿಯನ್ನು ಇಲಾಖಾ ಮುಖ್ಯಸ್ಥರ ಮೂಲಕ ಸಲ್ಲಿಸುವುದು.
- ಅಭ್ಯರ್ಥಿಗಳ ಆಯ್ಕೆ ಬಗ್ಗೆ ಪ್ರಚಾರ ಅಥವಾ ಶಿಫಾರಸ್ಸುಗಳನ್ನು ಮಾಡಿದರೆ ಅಂತಹವರ ಅರ್ಜಿಯನ್ನು ತಿರಸ್ಕರಿಸಲಾಗುವುದು.
- ಅರ್ಜಿದಾರರೊಡನೆ ನೇಮಕಾತಿ ಸಂಬಂಧ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ. ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಮಾಹಿತಿಯನ್ನು ಪಡೆದು ಪರಿಶೀಲನಾ ದಿನಾಂಕದಂದು ಮೂಲ ದಾಖಲಾತಿಗಳ ಪರಿಶೀಲನೆಗೆ ಎಲ್ಲಾ ಮೂಲ ದಾಖಲೆಗಳು ಹಾಗೂ ಎಲ್ಲಾ ಮೂಲ ದಾಖಲೆಗಳ ದೃಢೀಕೃತ ಪ್ರತಿಯೊಂದಿಗೆ ಹಾಜರಾಗತಕ್ಕದ್ದು. ಪರಿಶೀಲನಾ ದಿನಾಂಕದಂದು ಗೈರು ಹಾಜರಾದರೆ ಅಥವಾ ಮೂಲ ದಾಖಲೆಗಳನ್ನು ಹಾಜರುಪಡಿಸದೆ ಇರುವ ಅಭ್ಯರ್ಥಿಗಳ ಅರ್ಜಿಯನ್ನು ಯಾವುದೇ ಸೂಚನೆ ನೀಡದೆ ತಿರಸ್ಕೃತಗೊಳಿಸಲಾಗುವುದು.
- **ಆಯ್ಕೆಯನ್ನು ಅಭ್ಯರ್ಥಿಯ ಮೆರಿಟ್ ಮತ್ತು ರೋಸ್ಟರ್ ಆಧಾರದ ಮೇಲೆ ಮಾತ್ರ ಪರಿಗಣಿಸಲಾಗುವುದು.**
- ಜಾತಿ ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಸಂಬಂಧಿಸಿದ ಜಿಲ್ಲಾಧಿಕಾರಿಗಳವರಿಂದ (ಅಧ್ಯಕ್ಷರು, ಜಾತಿ ಮತ್ತು ಆದಾಯ ಪರಿಶೀಲನಾ ಸಮಿತಿ) ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.
- ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳು, ಚಿತ್ರದುರ್ಗರವರು ಕಾಯ್ದಿರಿಸಿಕೊಂಡಿರುತ್ತಾರೆ.
- ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮರು ದಿನವೂ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.
- ಅಧಿಸೂಚನೆಯ ಕೊನೆಯ ದಿ:28-8-2015 ರ ದಿನಾಂಕದೊಳಗಾಗಿ ಎಲ್ಲಾ ಪ್ರಮಾಣ ಪತ್ರಗಳನ್ನು ಸಕ್ಷಮ ಪ್ರಾಧಿಕಾರದಿಂದ ಕಡ್ಡಾಯವಾಗಿ ಪಡೆದುಕೊಂಡಿರಬೇಕು.
- ಆಯ್ಕೆಯು ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸುವ ನಿಯಮಗಳಿಗೆ ಒಳಪಟ್ಟಿರುತ್ತದೆ.
- ಅರ್ಜಿಯಲ್ಲಿ ತಪ್ಪು/ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳ ನೇಮಕಾತಿಯನ್ನು ವಜಾಗೊಳಿಸುವುದಲ್ಲದೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.

(ವಿ.ಕೆ.ಶ್ರೀರಂಗಯ್ಯ)
**ಜಿಲ್ಲಾಧಿಕಾರಿಗಳು,**
**ಚಿತ್ರದುರ್ಗ ಜಿಲ್ಲೆ.**

## ಆಯ್ಕೆ ಪ್ರಕ್ರಿಯೆ ವೇಳಾಪಟ್ಟಿ
## (Calender of Events)

| ಕ್ರ ಸಂ: | ವಿವರಗಳು | ದಿನಾಂಕ |
|---|---|---|
| 1 | ಅಧಿಸೂಚನೆ ಹೊರಡಿಸಿದ ದಿನಾಂಕ: | 27–7–2015 |
| 2 | ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕ: | 29–7–2015 |
| 3 | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: | 28–8–2015 |
| 4 | ಶುಲ್ಕ ಪಾವತಿಸಿದ ಚಲನ್ ಅಪ್‌ಲೋಡ್ ಮಾಡಲು ಕೊನೆಯ ದಿನಾಂಕ: | 4–9–2015 |
| 5 | ತಾತ್ಕಾಲಿಕ ಪರಿಶೀಲನಾ ಆಯ್ಕೆ ಪಟ್ಟಿಯನ್ನು ಪ್ರಕಟಿಸಬೇಕಾದ ದಿನಾಂಕ! | 28–9–2015 |
| 6 | ತಾತ್ಕಾಲಿಕ ಪರಿಶೀಲನಾ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ನಿಗದಿಪಡಿಸಿದ ದಿನಾಂಕ: | 8–10–2015 |
| 7 | ತಾತ್ಕಾಲಿಕ ಪರಿಶೀಲನಾ ಆಯ್ಕೆ ಪಟ್ಟಿಯಂತೆ ಅಭ್ಯರ್ಥಿಗಳು ಮೂಲ ದಾಖಲಾತಿಗಳೊಂದಿಗೆ ಪರಿಶೀಲನೆಗೆ ಜಿಲ್ಲಾಧಿಕಾರಿಗಳ ಕಛೇರಿಗೆ ಹಾಜರಾಗಲು ನಿಗದಿಪಡಿಸಿದ ದಿನಾಂಕ ಮತ್ತು ಸಮಯ | 15–10–2015ರ ಬೆಳಿಗ್ಗೆ 10–30ಗಂಟೆಗೆ |
| 8 | ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲು ನಿಗದಿಪಡಿಸಿದ ದಿನಾಂಕ | 30–10–2015 |
| 9 | ಸ್ಪಷ್ಟೀಕರಣ /ಮಾಹಿತಿಗಾಗಿ ಸಂಪರ್ಕಿಸಬಹುದಾದ ಹೆಲ್ಪ್‌ಲೈನ್ | 08194-222538 |
| 10 | ವೆಬ್ ಸೈಟ್ ವಿಳಾಸ | http://chitradurga-va.kar.nic.in |

ಸಿ.

ಜಿಲ್ಲಾಧಿಕಾರಿಗಳು
ಚಿತ್ರದುರ್ಗ
27/7